ಸಾಕ್ಷಿಯನ್ನು ಕರೆಯಿಸಿ ಪ್ರಮಾಣವಚನವನ್ನು ಭೋಧಿಸಲಾದ ದಿನಾಂಕಃ 24.03.2026

ಮುಂದುವರೆದ ಪಾಟೀ ಸವಾಲು : ಪ್ರತಿವಾದಿಗಳ ಪರ ಶ್ರೀ.ಡಿ.ಆರ್.ಎಂ. ವಕೀಲರಿಂದ

1. ನನ್ನ ಅಜ್ಜ ತಿಮ್ಮೇಗೌಡರವರ ತಂದೆಯ ಹೆಸರು ನನಗೆ ಗೊತ್ತಿಲ್ಲ. ನನ್ನ ತಂದೆ ರಾಗಿಯನ್ನು ಎ.ಪಿ.ಎಂ.ಸಿ ಮಾರುಕಟ್ಟೆಗೆ ಹಾಕುತ್ತಿದ್ದರು ಎಂದರೆ ಸರಿ. ಸಾಕ್ಷಿಯು ಮುಂದುವರೆದು ಒಟ್ಟಿಗೆ ಬೆಳೆಯುತ್ತಿದ್ದಾಗ ಹಾಕುತ್ತಿದ್ದರು ಎಂದು ನುಡಿಯುತ್ತಾರೆ. ನನ್ನ ತಂದೆ ಅವರ ಹೆಸರಿನಲ್ಲಿ ಮತ್ತು ಅವರ ಅಣ್ಣನಾದ ಪ್ರತಿವಾದಿಯ ಹೆಸರಿನಲ್ಲಿ ಹಾಕಿರುತ್ತಾರೆ. ಒಂದು ವೇಳೆ ಪ್ರತಿವಾದಿಯು ಒಟ್ಟು ಕುಟುಂಬದ ಕರ್ತ ಆಗಿದ್ದರೆ ಅವರ ಹೆಸರಿನಲ್ಲಿಯೇ ರಾಗಿಯನ್ನು ಸರಬರಾಜು ಮಾಡಬಹುದಿತ್ತು, ನನ್ನ ತಂದೆಯು ಪ್ರತ್ಯೇಕವಾಗಿ ವಾಸವಾಗಿದ್ದು ಅವರ ಜಮೀನಿನಲ್ಲಿ ಬೆಳೆದ ಬೆಳೆಯನ್ನು ಸರಬರಾಜು ಮಾಡಿರುವ ಕಾರಣ ಒಬ್ಬರ ಹೆಸರಿನಲ್ಲಿ ಸರಬರಾಜು ಮಾಡಲಾಗಿದೆ ಎಂದರೆ ಸರಿಯಲ್ಲ. ನಮ್ಮ ತಂದೆ ಮತ್ತು ಪ್ರತಿವಾದಿಯು ವಿಭಾಗದಲ್ಲಿ ಬಂದ ಅವರವರ ಜಮೀನಿನಲ್ಲಿ ಬೆಳೆದ ಬೆಳೆಯನ್ನು ಪ್ರತ್ಯೇಕವಾಗಿ ತಮ್ಮ ತಮ್ಮ ಹೆಸರಿನಲ್ಲಿ ಎ.ಪಿ.ಎಂ.ಸಿ ಮಾರುಕಟ್ಟೆಗೆ ಸರಬರಾಜು ಮಾಡಿರುತ್ತಾರೆ ಎಂದರೆ ಸುಳ್ಳು. ಸಾಮಾನ್ಯವಾಗಿ ಒಟ್ಟು ಕುಟುಂಬದಲ್ಲಿ ಇದ್ದರೆ ಪಡಿತರ ಚೀಟಿಯಲ್ಲಿ ಎಲ್ಲಾ ಸದಸ್ಯರ ಬರುತ್ತದೆ ಎಂದರೆ ಸರಿ. ನನ್ನ ತಂದೆ, ಪ್ರತಿವಾದಿ, ನನ್ನ ಅಣ್ಣ-ಅತ್ತಿಗೆ ಹೆಸರಿನಲ್ಲಿ ಪ್ರತ್ಯೇಕ ಪಡಿತರ ಚೀಟಿ ಇದೆ. ಸಾಕ್ಷಿಯು ಮುಂದುವರೆದು ಅದನ್ನು ಪ್ರತಿವಾದಿಯೇ ಮಾಡಿಸಿಕೊಟ್ಟಿರುತ್ತಾರೆ ಎಂದು ನುಡಿಯುತ್ತಾರೆ. ಅದನ್ನು

ಒಟ್ಟು ಕುಟುಂಬದಲ್ಲಿ ಇದ್ದಾಗಲೇ ಕಳೆದ 8 ವರ್ಷಗಳ ಹಿಂದೆ ಮಾಡಿಸಿರುತ್ತಾರೆ.

2. ನಾನು ನನ್ನ ಅಮ್ಮನ ಹೆಸರಿನಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘಕ್ಕೆ ಹಾಲು ಸರಬರಾಜು ಮಾಡುತ್ತಿದ್ದೇನೆ. ನನಗೆ ಜಮೀನಿನ ವಿಚಾರಗಳಿಗೆ ಸಂಬಂಧಪಟ್ಟಂತೆ ಯಾವುದೇ ಸಂಗತಿಯು ತಿಳಿದಿಲ್ಲ, ನಾನು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ: ಇಲ್ಲ.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ.

(ದೇವರಾಜು ಹೆಚ್.ಆರ್.)
1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ ಕೆ.ಆರ್.ಪೇಟೆ.